# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 121(1282) |
| ಸದಸ್ಯರ ಹೆಸರು | : | ಶ್ರೀ ಶ್ರೀ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 22.08.2025 |
| ಉತ್ತರಿಸಬೇಕಾದವರು | : | ಸನ್ಮಾನ್ಯ ಮುಖ್ಯ ಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತವಾಗಿ ವಾಸವಿರುವ ಗಿರಿಜನರ ಸಂಖ್ಯೆ ಎಷ್ಟು: (ವಿವಿಧ ಅರಣ್ಯ ಪ್ರದೇಶವಾರು ಒದಗಿಸುವುದು) | 2011 ರ ಜನಗಣತಿಯ ಪ್ರಕಾರ ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಒಟ್ಟು ಜನಸಂಖ್ಯೆ 42,48,987 ಆಗಿರುತ್ತದೆ. ಈ ಪೈಕಿ ಅರಣ್ಯ ಮತ್ತು ಅರಣ್ಯದ ಅಂಚಿನಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಪಂಗಡದ ಜಿಲ್ಲಾವಾರು ಜನಸಂಖ್ಯೆ ವಿವರ ಈ ಕೆಳಕಂಡಂತಿದೆ. (ಕೋಷ್ಟಕ ಕೆಳಗೆ) |
| ಆ) | ಸದರಿ ಜನಾಂಗದವರು ಗಳಿಸಿಕೊಂಡಿರುವ ವಿಶೇಷ ನೈಪುಣ್ಯತೆಗಳನ್ನು ಸರ್ಕಾರ ಯಾವ ರೀತಿಯ ಅಧ್ಯಯನ ಮಾಡಿದೆ; | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ವತಿಯಿಂದ ಬುಡಕಟ್ಟು ಸಂಸ್ಕೃತಿ ಮತ್ತು ನೈಪುಣ್ಯತೆಯನ್ನು ಸಂರಕ್ಷಿಸಲು ವಿವಿಧ ಬುಡಕಟ್ಟು ಸಮುದಾಯಗಳ ಕಲೆ ಮತ್ತು ಸಾಹಿತ್ಯ ಕುರಿತು ಅಧ್ಯಯನ ಮಾಡಲಾಗಿದೆ. ಹಾಗೂ ಬುಡಕಟ್ಟು ಸಮುದಾಯದವರ ಸಾಕ್ಷ್ಯಚಿತ್ರ ತಯಾರಿಸುವುದು, ತರಬೇತಿ/ ಅರಿವು ಮೂಡಿಸುವ ಕಾರ್ಯಕ್ರಮ, ಭಾಷೆಗಳ ಸಂರಕ್ಷಣೆಗಾಗಿ ಪ್ರಾಥಮಿಕೆಗಳನ್ನು ಸೃಜಿಸಲಾಗುತ್ತದೆ. ಬುಡಕಟ್ಟು ಪ್ರತಿನಿಧಿಗಳ ಅಂತರ ರಾಜ್ಯ ಪ್ರವಾಸ, ಬುಡಕಟ್ಟು ಜನರುಗಳು ಬಳಸುತ್ತಿದ್ದ ಪರಿಕರಗಳನ್ನು ಸಂಗ್ರಹಿಸಿ ಸಂಸ್ಥೆಯ ವಸ್ತು ಸಂಗ್ರಹಾಲಯದಲ್ಲಿ ಸಂರಕ್ಷಿಸಲಾಗುತ್ತದೆ, ಬುಡಕಟ್ಟು ಉತ್ಸವಗಳನ್ನು ಆಯೋಜಿಸಲಾಗುತ್ತಿದೆ. |
| ಇ) | ಸದರಿಯವರಿಗೆ ಸರ್ಕಾರ ಎಲ್ಲರಿಗೂ ಯಾವ ರೀತಿಯಲ್ಲಿ ಶಿಕ್ಷಣ ನೀಡುವ ವ್ಯವಸ್ಥೆಯನ್ನು ಮಾಡಿದೆ; | • ಇಲಾಖಾವತಿಯಿಂದ ಈ ಕೆಳಕಂಡ ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಲಾಗುತ್ತಿದೆ.<br>1. ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು.<br>2. ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಾತಿ.<br>3. ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ. |

(ಅ) ಉತ್ತರದ ಕೋಷ್ಟಕ:

| ಕ್ರ.ಸಂ. | ಜಿಲ್ಲೆ | ಜನ ಸಂಖ್ಯೆ |
|---|---|---|
| 1 | ಮೈಸೂರು | 49778 |
| 2 | ಚಾಮರಾಜನಗರ | 27763 |
| 3 | ಕೊಡಗು | 58054 |
| 4 | ಉಡುಪಿ | 52897 |
| 5 | ದಕ್ಷಿಣ ಕನ್ನಡ | 82268 |
| 6 | ಉತ್ತರ ಕನ್ನಡ | 26949 |
| 7 | ಚಿಕ್ಕಮಗಳೂರು | 51234 |
| 8 | ಶಿವಮೊಗ್ಗ | 49963 |
| 9 | ರಾಮನಗರ | 27044 |

| | | |
|---|---|---|
| | | 4. ಎಸ್.ಎಸ್.ಎಲ್.ಸಿ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಪ್ರಥಮ ದರ್ಜೆಯಲ್ಲಿ, ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ.<br>5. ಪ್ರತಿಷ್ಠಿತ ಶಾಲೆಗಳಲ್ಲಿ ದಾಖಲಾದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಶಾಲಾ ಶುಲ್ಕ ಮತ್ತು ನಿರ್ವಹಣಾ ವೆಚ್ಚವನ್ನು ಭರಿಸುವ ಕಾರ್ಯಕ್ರಮ.<br>6. ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ಪಡೆಯಲು ಪ್ರಬುದ್ಧ ಯೋಜನೆಯಡಿ ಧನಸಹಾಯ.<br>7. ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ರೂ.2.00 ಲಕ್ಷಗಳ ಧನಸಹಾಯ.<br>8. ವಿಶ್ವವಿದ್ಯಾಲಯ ಮಟ್ಟದಲ್ಲಿ 1 ರಿಂದ 5ನೇ ರಾಂಕ್ ಪಡೆದ ವಿದ್ಯಾರ್ಥಿಗಳಿಗೆ ರೂ.50,000/-ಗಳ ಪ್ರೋತ್ಸಾಹಧನ.<br>9. ಜೇನುಕುರುಬ ಹಾಗೂ ಕೊರಗ ಸಮುದಾಯದ ವಿದ್ಯಾವಂತ ಯುವಕ/ಯುವತಿಯರಿಗೆ ಶೈಕ್ಷಣಿಕ ಪ್ರೋತ್ಸಾಹಧನ ಹಾಗೂ ನಿರುದ್ಯೋಗಿ ಜೀವನ ಭತ್ಯೆ ಕಾರ್ಯಕ್ರಮ.<br>10. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ಯೋಜನೆ.<br>• ರಾಮನಗರ, ಮೈಸೂರು, ಚಾಮರಾಜನಗರ, ಹಾಸನ, ಕೊಡಗು, ಚಿಕ್ಕಮಗಳೂರು, ದಕ್ಷಿಣಕನ್ನಡ, ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಗಳ ಅರಣ್ಯ ಹಾಗೂ ಅರಣ್ಯದಂಚಿನ ವ್ಯಾಪ್ತಿಯಲ್ಲಿ ಇಲಾಖಾವತಿಯಿಂದ 89 ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು ಹಾಗೂ 78 ಮೆಟ್ರಿಕ್ ಪೂರ್ವ/ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ.<br>• ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 124 ಪಕವಿ 2019, ದಿನಾಂಕ:17.07.2019ರನ್ವಯ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕೋರಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಅವರು ಕೋರುವ ಅಥವಾ ಸಮೀಪದ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾತಿ ಮಾಡಿಕೊಳ್ಳಲಾಗುತ್ತಿದೆ. |
| **ಈ)** | ಇವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸರ್ಕಾರ ಮಾಡಿರುವ ಪ್ರಯತ್ನಗಳೇನು? (ಈ ಬಗ್ಗೆ ಸಾಧಿಸಿರುವ ಸಾಧನೆಗಳನ್ನು ವರ್ಷವಾರು ಅಂಕಿ-ಅಂಶಗಳೊಂದಿಗೆ ಮಾಹಿತಿ ನೀಡುವುದು) | ಅರಣ್ಯ ಹಾಗೂ ಅರಣ್ಯದಂಚಿನಲ್ಲಿ ವಾಸಿಸುತ್ತಿರುವ ಬುಡಕಟ್ಟು ಸಮುದಾಯದವರನ್ನು ಸಮಾಜದ ಮುಖ್ಯವಾಹಿನಿಗೆ ತರಲು 2024-25ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಲಾಗಿದೆ.<br><br>**I. ಶೈಕ್ಷಣಿಕ ಕಾರ್ಯಕ್ರಮಗಳು:**<br>1. 9 ಜಿಲ್ಲೆಗಳಲ್ಲಿ 89 ಆಶ್ರಮ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಶಾಲೆಗಳಲ್ಲಿ 10447 ವಿದ್ಯಾರ್ಥಿಗಳಿಗೆ ಉಚಿತ ವಸತಿ ಸೌಲಭ್ಯದೊಂದಿಗೆ ಶಿಕ್ಷಣವನ್ನು ನೀಡಲಾಗುತ್ತಿದೆ.<br>2. ಬುಡಕಟ್ಟು ಜನಾಂಗದ ಶೈಕ್ಷಣಿಕ ಉದ್ದೇಶಕ್ಕಾಗಿ ಸ್ಥಾಪಿಸಲಾಗಿರುವ 78 ಬುಡಕಟ್ಟು ವಸತಿ ಶಾಲೆಗಳಲ್ಲಿ 2025-26ನೇ ಸಾಲಿನಿಂದ 7ನೇ ತರಗತಿಯನ್ನು ಪ್ರಾರಂಭಿಸಲಾಗಿದೆ.<br>3. ಮೈಸೂರು, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಗಳಲ್ಲಿ 5 ಆಶ್ರಮ ಶಾಲೆಗಳನ್ನು 12ನೇ ತರಗತಿವರೆಗೆ ಮೇಲ್ದರ್ಜೆಗೇರಿಸಲಾಗಿದೆ.<br>4. ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ 78 ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಒಟ್ಟಾರೆ 4500 ವಿದ್ಯಾರ್ಥಿಗಳಿಗೆ ಉಚಿತ ವಸತಿ ಸೌಲಭ್ಯ ಕಲ್ಪಿಸಲಾಗಿದೆ. |

5. ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ, ಸಮವಸ್ತ್ರ, ಶೂಪಿಸಾಕ್ಸ್, ಶುಚಿ ಸಂಭ್ರಮ ಕಿಟ್, ಲೇಖನಾ ಸಾಮಗ್ರಿಗಳು, ಟೂ-ಟಯರ್ ಕಾಟ್, ಹಾಸಿಗೆ-ಹೊದಿಕೆ, ಡೈನಿಂಗ್ ಟೇಬಲ್ ಇತ್ಯಾದಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.
6. ಜೇನುಕುರುಬ ಮತ್ತು ಕೊರಗ ಸಮುದಾಯದ ವಿದ್ಯಾವಂತ ಯುವಕ ಯುವತಿಯರಿಗೆ ಶೈಕ್ಷಣಿಕ ಪ್ರೋತ್ಸಾಹಧನ ಹಾಗೂ ನಿರುದ್ಯೋಗ ಜೀವನ ಭತ್ಯೆ ಕಾರ್ಯಕ್ರಮದಡಿ 570 ಅಭ್ಯರ್ಥಿಗಳಿಗೆ ರೂ.0.75 ಕೋಟಿಗಳನ್ನು ವೆಚ್ಚ ಮಾಡಲಾಗಿದೆ.
7. ಎಸ್.ಎಸ್.ಎಲ್.ಸಿ ಮತ್ತು ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ 8476 ವಿದ್ಯಾರ್ಥಿಗಳಿಗೆ ರೂ.14.98 ಕೋಟಿಗಳನ್ನು ವೆಚ್ಚ ಮಾಡಲಾಗಿದೆ.
8. ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ 82429 ವಿದ್ಯಾರ್ಥಿಗಳಿಗೆ ರೂ.53.64 ಕೋಟಿಗಳನ್ನು ಮಂಜೂರು ಮಾಡಲಾಗಿದೆ.
9. ಕಾನೂನು ಪದವೀಧರರಿಗೆ ಶಿಷ್ಯವೇತನ ಕಾರ್ಯಕ್ರಮದಡಿ 19 ಅಭ್ಯರ್ಥಿಗಳಿಗೆ ರೂ.0.09 ಕೋಟಿಗಳನ್ನು ಮಂಜೂರು ಮಾಡಲಾಗಿದೆ.
10. ಮೈಸೂರು, ಚಾಮರಾಜನಗರ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ 4 ಏಕಲವ್ಯ ಮಾದರಿ ವಸತಿ ಶಾಲೆಗಳ ಮೂಲಕ ಗುಣಮಟ್ಟದ ಶಿಕ್ಷಣ ನೀಡಲು ಕ್ರಮವಹಿಸಲಾಗುತ್ತಿದೆ.

II. **ಸಾಮಾಜಿಕ ಕಾರ್ಯಕ್ರಮಗಳು**:

1. ವಿವಿಧ ವಿವಾಹ ಕಾರ್ಯಕ್ರಮಗಳಡಿ ಒಟ್ಟು 381 ಫಲಾನುಭವಿಗಳಿಗೆ ರೂ.7.63 ಕೋಟಿಗಳನ್ನು ವೆಚ್ಚ ಮಾಡಲಾಗಿದೆ.
2. ಪೌಷ್ಠಿಕ ಆಹಾರ ಪದಾರ್ಥಗಳ ವಿತರಣೆ ಕಾರ್ಯಕ್ರಮದಡಿ ಅರಣ್ಯ ಹಾಗೂ ಅರಣ್ಯದಂಚಿನಲ್ಲಿ ವಾಸಿಸುತ್ತಿರುವ 12 ಸಮುದಾಯದ 48759 ಕುಟುಂಬಗಳಿಗೆ ರೂ.71.48 ಕೋಟಿಗಳನ್ನು ವೆಚ್ಚ ಭರಿಸಲಾಗಿದೆ.
3. ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ವಾಸಿಸುತ್ತಿರುವ ಕೊರಗ ಸಮುದಾಯದವರಿಗೆ ವೈದ್ಯಕೀಯ ವೆಚ್ಚ ಮರುಪಾವತಿ ಕಾರ್ಯಕ್ರಮದಡಿ 48 ಫಲಾನುಭವಿಗಳಿಗೆ ರೂ.0.20 ಕೋಟಿಗಳ ವೆಚ್ಚ ಮಾಡಲಾಗಿದೆ.

III. **ಮೂಲಭೂತ ಸೌಕರ್ಯಗಳು:**

1. ಪ್ರಗತಿ ಕಾಲೋನಿ ಯೋಜನೆಯಡಿ ಮೈಸೂರು ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ರೂ.6.50 ಕೋಟಿಗಳ ಮಂಜೂರಾತಿ ನೀಡಿ ಮೊದಲನೇ ಕಂತಿನಲ್ಲಿ ರೂ.3.50 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.
2. ಕೊರಗ ಮತ್ತು ಜೇನುಕುರುಬ ಸಮುದಾಯದವರು ವಾಸಿಸುತ್ತಿರುವ ಹಾಡಿ/ಕಾಲೋನಿಗಳಲ್ಲಿ ರೂ.15.00 ಕೋಟಿಗಳ ವೆಚ್ಚದಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಕ್ರಮವಹಿಸಲಾಗಿದೆ.
3. ಅಲೆಮಾರಿ/ ಅರೆ ಅಲೆಮಾರಿ ಸಮುದಾಯದವರು ವಾಸಿಸುತ್ತಿರುವ ಹಾಡಿ/ಕಾಲೋನಿಗಳಲ್ಲಿ ರೂ.20.00 ಕೋಟಿಗಳ ವೆಚ್ಚದಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಕ್ರಮವಹಿಸಲಾಗಿದೆ.

| | | |
|---|---|---|
| | | 4. ವಾಲ್ಮೀಕಿ/ಸಮುದಾಯ ಭವನಗಳನ್ನು ನಿರ್ಮಾಣ ಮಾಡಲು ರೂ.7.85 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.<br>5. 9 ಜಿಲ್ಲೆಗಳಲ್ಲಿ ವಿದ್ಯುತ್ ಸೌಲಭ್ಯ ಇಲ್ಲದಿರುವ 76 ಹಾಡಿ/ಕಾಲೋನಿಗಳ ಪೈಕಿ 9 ಹಾಡಿಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ, 32 ಹಾಡಿಗಳಲ್ಲಿ ಇಂಧನ ಇಲಾಖೆಯಿಂದ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.<br>6. ಚಾಮರಾಜನಗರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸೌಲಭ್ಯವಿಲ್ಲದೇ ಇರುವ 20 ಹಾಡಿಗಳ ಪೈಕಿ 19 ಹಾಡಿಗಳಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ ಹಾಗೂ ಸಂಪರ್ಕ ರಸ್ತೆ ಇಲ್ಲದಿರುವ 38 ಹಾಡಿಗಳ ಪೈಕಿ 22 ಹಾಡಿಗಳಲ್ಲಿ ನರೇಗ ಯೋಜನೆಯಡಿ ಕಾಮಗಾರಿಗಳನ್ನು RDPR ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.<br>7. 2022-23ನೇ ಸಾಲಿನಲ್ಲಿ PVTG ಸಮುದಾಯಗಳಾದ ಜೇನುಕುರುಬ ಮತ್ತು ಕೊರಗ ಸಮುದಾಯಗಳಿಗೆ 2732 ಮನೆಗಳನ್ನು ನಿರ್ಮಾಣ ಮಾಡಲು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ 5 ಜಿಲ್ಲೆಗಳಲ್ಲಿ ರೂ.3.75 ಲಕ್ಷಗಳ ಘಟಕ ವೆಚ್ಚದಲ್ಲಿ 1758 ಮನೆಗಳನ್ನು ನಿರ್ಮಾಣ ಮಾಡಿದ್ದು 492 ಮನೆಗಳ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಮುಂದುವರೆದು ರೂ.4.50 ಲಕ್ಷಗಳ ಘಟಕ ವೆಚ್ಚದಲ್ಲಿ 1598 ಮನೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ.<br>8. ಪ್ರಧಾನ ಮಂತ್ರಿ ಜನ್‌ಮನ್ ಕಾರ್ಯಕ್ರಮದಡಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ರೂ.4.50 ಲಕ್ಷಗಳ ಘಟಕ ವೆಚ್ಚದಲ್ಲಿ 1100 ಮನೆಗಳ ನಿರ್ಮಾಣ ಮಾಡಲು ಅನುಮೋದನೆಯಾಗಿದ್ದು, ಮನೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುತ್ತದೆ.<br>9. ಮೈಸೂರು, ಚಾಮರಾಜನಗರ, ಕೊಡಗು, ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ತಲಾ ರೂ.60.00 ಲಕ್ಷಗಳ ಘಟಕ ವೆಚ್ಚದಲ್ಲಿ 74 ಬಹುಉದ್ದೇಶಿತ ಕೇಂದ್ರಗಳನ್ನು ರೂ.44.40 ಕೋಟಿಗಳ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದೆ.<br>10. ಮೈಸೂರು, ಚಾಮರಾಜನಗರ, ಕೊಡಗು, ದಕ್ಷಿಣಕನ್ನಡ & ಉಡುಪಿ ಜಿಲ್ಲೆಗಳಲ್ಲಿ ಅರಣ್ಯ ಹಾಗೂ ಅರಣ್ಯದಂಚಿನಲ್ಲಿ ವಾಸಿಸುತ್ತಿರುವ ಬುಡಕಟ್ಟು ಜನಾಂಗದವರಿಗೆ ಉತ್ತಮ ಆರೋಗ್ಯ ಸೇವೆ ದೊರೆಯುವಂತೆ ಮಾಡಲು 2025-26ನೇ ಸಾಲಿನಲ್ಲಿ ರೂ.1.00 ಕೋಟಿಗಳನ್ನು ನಿಗಧಿಪಡಿಸಿ Tribal Health Navigator ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.<br>11. ಕಿರು ಅರಣ್ಯ ಉತ್ಪನ್ನಗಳನ್ನು ಸಂಗ್ರಹಿಸಿ ಸಂಸ್ಕರಿಸಲು ನೆರವಾಗುವಂತೆ ಲ್ಯಾಂಪ್ಸ್ (LAMPS) ಸಹಕಾರ ಸಂಘಗಳಿಗೆ ದುಡಿಯುವ ಬಂಡವಾಳ ರೂಪದಲ್ಲಿ ತಲಾ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br>12. ಅರಣ್ಯ ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ ಸೋಲಿಗ, ಹಸಲರು, ಜೇನುಕುರುಬ, ಗೌಡಲು, ಸಿದ್ದಿ, ಕುಡಿಯ, ಮಲೈಕುಡಿ, ಕಾಡುಕುರುಬ, ಇರುಳಿಗ, ಕೊರಗ, ಬೆಟ್ಟಕುರುಬ, ಯರವ, ಪಣಿಯನ್ ಇತ್ಯಾದಿ ಪರಿಶಿಷ್ಟ ಪಂಗಡದ ಬುಡಕಟ್ಟು |

| | | |
|---|---|---|
| | | ಜನಾಂಗದವರಿಗೆ ರೂ.200.00 ಕೋಟಿಗಳ ವೆಚ್ಚದಲ್ಲಿ ಮೂಲಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.<br>13. ಮೈಸೂರು ನಗರದಲ್ಲಿರುವ ಬುಡಕಟ್ಟು ಸಂಶೋಧನಾ ಕೇಂದ್ರದ ಆವರಣದಲ್ಲಿ ಬುಡಕಟ್ಟು ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.<br>14. 9 ಜಿಲ್ಲೆಗಳಲ್ಲಿ ಅರಣ್ಯ ಹಕ್ಕು ಕಾಯ್ದೆಯಡಿ 14132 ಹಕ್ಕು ಪತ್ರಗಳನ್ನು ನೀಡಲಾಗಿದೆ. |

STW/SECB/STP/351/2025

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ